# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 401 |
| 2 | ಸದಸ್ಯರ ಹೆಸರು | ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | 18-02-2022 |
| 4 | ಉತ್ತರಿಸುವವರು | ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು |

| | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ರಾಜ್ಯದಲ್ಲಿ ಒಟ್ಟು ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆ ಬೆಳೆಯಲಾಗುತ್ತಿದೆ: | ರಾಜ್ಯದಲ್ಲಿ ಜನವರಿ-2022 ರ ಅಂತ್ಯಕ್ಕೆ ಒಟ್ಟು 111813.67 ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆ ಬೆಳೆಯನ್ನು ಬೆಳೆಯಲಾಗುತ್ತಿದೆ. |
| ಆ | ರಾಜ್ಯದಲ್ಲಿ ರೇಷ್ಮೆ ಬೆಳೆ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಹಿಪ್ಪುನೇರಳೆ ವಿಸ್ತೀರ್ಣದ ವಿವರ ಕೆಳಕಂಡಂತಿರುತ್ತದೆ.<br>(ಕೆಳಗಿನ ಕೋಷ್ಟಕ ನೋಡಿ)<br>ಮೇಲ್ಕಂಡ ಅಂಕಿ ಅಂಶಗಳನ್ನು ಗಮನಿಸಿದಾಗ ರೇಷ್ಮೆ ಬೆಳೆ ಕುಂಠಿತವಾಗಿರುವುದಿಲ್ಲ. |
| ಇ | ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು: (ವಿವರ ನೀಡುವುದು) | ಅನ್ವಯಿಸುವುದಿಲ್ಲ |
| ಈ | ರೇಷ್ಮೆ ಬೇಸಾಯವನ್ನು ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಯೋಜನೆಗಳೇನು: (ರೂಪು ರೇಷೆಗಳ ಮಾಹಿತಿ ನೀಡುವುದು) | ರೇಷ್ಮೆ ಬೇಸಾಯವನ್ನು ವಿಸ್ತರಿಸಲು ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳ ವಿವರ ಕೆಳಕಂಡಂತಿದೆ.<br>1. ಸುಧಾರಿತ ಹಿಪ್ಪುನೇರಳೆ ತೋಟ ಬೆಳೆಯಲು, ನರ್ಸರಿ ಬೆಳೆಸಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ ಒದಗಿಸಲಾಗುತ್ತಿದೆ.<br>2. ಹಿಪ್ಪುನೇರಳೆ ತೋಟಕ್ಕೆ ಟ್ರಂಚಿಂಗ್ – ಮಲ್ಚಿಂಗ್ ಮಾಡಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ.<br>3. ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಅಳವಡಿಕೆಗೆ ಶೇ.90ರಷ್ಟು ಸಹಾಯಧನ.<br>4. ಹಿಪ್ಪುನೇರಳೆ ತೋಟದ ಮಣ್ಣಿನ ಫಲವತ್ತತೆಗಾಗಿ ಜೈವಿಕಗೊಬ್ಬರ ಬಳಕೆಗೆ ಸಹಾಯಧನ.<br>5. ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಉತ್ತೇಜನಕ್ಕಾಗಿ ಸಹಾಯಧನ.<br>6. |

| ಆರ್ಥಿಕ ವರ್ಷ | ಹಿಪ್ಪುನೇರಳೆ ವಿಸ್ತೀರ್ಣ(ಹೆಕ್ಟೇರ್‌ಗಳಲ್ಲಿ) |
|---|---|
| 2019-20 | 106384.30 |
| 2020-21 | 107543.57 |
| 2021-22 | 111813.67 (ಜನವರಿ-2022ರ ಅಂತ್ಯಕ್ಕೆ) |

| | | |
|---|---|---|
| | | 1. ರೇಷ್ಮೆ ಹುಳು ಸಾಕಾಣಿಕೆ ಮನೆ/ಮೌಂಟಿಂಗ್ ಹಾಲ್ ನಿರ್ಮಾಣಕ್ಕೆ ಸಹಾಯಧನ.<br>2. ಸೋಂಕು ನಿವಾರಕಗಳ ಪೂರೈಕೆ ಮತ್ತು ಸಲಕರಣೆಗಳಿಗೆ ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ.<br>3. ದ್ವಿತಳಿ ಚಾಕಿ ವೆಚ್ಚಕ್ಕೆ ಸಹಾಯಧನ.<br>4. ಚಾಕಿ ಸಾಕಾಣಿಕಾ ಕೇಂದ್ರದ ಸ್ಥಾಪನೆಗೆ / ಸಲಕರಣೆಗಳಿಗೆ ಖರೀದಿಗೆ ಸಹಾಯಧನ.<br>5. ನೂತನ ತಾಂತ್ರಿಕತೆಗಳ ಅಳವಡಿಕೆಗೆ ರೈತರಿಗೆ ತರಬೇತಿ ಮತ್ತು ಕಾರ್ಯಾಗಾರ.<br>6. ರೇಷ್ಮೆ ಗೂಡಿನ ಧಾರಣೆ ಕುಸಿತ ಸಂದರ್ಭದಲ್ಲಿ ರೇಷ್ಮೆ ಬೆಳೆಗಾರರಿಗೆ ರಕ್ಷಣಾತ್ಮಕ ದರ ನೀಡಲಾಗುತ್ತಿದೆ.<br>7. ದ್ವಿತಳಿ ಬಿತ್ತನೆ ಬೆಳೆಗಾರರು ಹಾಗೂ ಮೈಸೂರು ಬಿತ್ತನೆ ಬೆಳೆಗಾರರು ಬೆಳೆಯುವ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ / ಬೋನಸ್ ನೀಡಲಾಗುತ್ತಿದೆ.<br>8. ರೇಷ್ಮೆ ಬಿತ್ತನೆ ಬೆಳೆಗಾರರಿಗೆ ಉತ್ಪಾದಕತೆ ಮತ್ತು ಗುಣಮಟ್ಟ ಆಧರಿಸಿ ಬಿತ್ತನೆ ಗೂಡಿಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ.<br>9. ಮೈಸೂರು ಬಿತ್ತನೆ ಪ್ರದೇಶದ ಬೆಳೆಗಾರರಿಗೆ ಬಿದರಿನ ಚಂದ್ರಿಕೆಗಳ ಸರಬರಾಜು<br>10. ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉತ್ಪಾದಿಸುವ ದ್ವಿತಳಿ ರೇಷ್ಮೆ ಗೂಡಿಗೆ ಕೆ.ಜಿ.ಗೆ ರೂ.10/-ರಂತೆ ಸಾಗಾಣಿಕೆ ವೆಚ್ಚ ನೀಡಲಾಗುತ್ತಿದೆ.<br>ಮುಂದುವರೆದು, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಹಿಪ್ಪುನೇರಳೆ ನರ್ಸರಿ / ತೋಟ ಸ್ಥಾಪನೆ, ತೋಟ ನಿರ್ವಹಣೆ ಮತ್ತು ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಸ್ಥಾಪನೆ ಹಾಗೂ ನಿರ್ವಹಣೆ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದ್ದು, ರೈತರಿಗೆ ಕೂಲಿ/ಸಾಮಗ್ರಿ ವೆಚ್ಚವನ್ನು ಭರಿಸುವ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗವಕಾಶವನ್ನು ಕಲ್ಪಿಸಿ ಆರ್ಥಿಕ ಸದೃಢತೆಯನ್ನು ಒದಗಿಸುವ ಯೋಜನೆ. |
| ಉ | ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ವಿಸ್ತರಿಸಲು ಸರ್ಕಾರ ಗುರಿ ಹೊಂದಿದೆ? | ರಾಜ್ಯದಲ್ಲಿ ಪ್ರತಿ ವರ್ಷ 6500 ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆ ವಿಸ್ತರಿಸಲು ಸರ್ಕಾರ ಗುರಿ ಹೊಂದಿದೆ. |

**ಸಂಖ್ಯೆ:ರೇಷ್ಮೆ 25 ರೇಕೃವಿ 2022**

**(ಡಾ. ನಾರಾಯಣಗೌಡ)**
**ರೇಷ್ಮೆ ಹಾಗೂ ಯುವ ಸಬಲೀಕರಣ**